ಬೆಂಗಳೂರು ಕೃಷಿ ವಿವಿಗೆ ನ್ಯಾಕ್ ಎ ಪ್ಲಸ್ ಮಾನ್ಯತೆ

ಬೆಂಗಳೂರು: ಬೆಂಗಳೂರು ಕೃಷಿ ವಿಶ್ವವಿದ್ಯಾಲಯಕ್ಕೆ ರಾಷ್ಟ್ರೀಯ ಮೌಲ್ಯಮಾಪನ ಮತ್ತು ಮಾನ್ಯತಾ ಮಂಡಳಿ (ನ್ಯಾಕ್)ಯು 'ಎ ಪ್ಲಸ್' ಮಾನ್ಯತೆ ನೀಡಿದೆ. 2025ರ ಫೆ.5 ರಿಂದ 7ರವರೆಗೆ ನ್ಯಾಕ್ ಮೌಲ್ಯಮಾಪನ ತಂಡವು ವಿಶ್ವವಿದ್ಯಾನಿಲಯ ಮತ್ತು ಹೊರಾವರಣದ ಮಹಾವಿದ್ಯಾಲಯಗಳಿಗೆ ಭೇಟಿ ನೀಡುವ ಮೂಲಕ ಸಮಗ್ರ ಮೌಲ್ಯಮಾಪನ ಕೈಗೊಂಡಿತ್ತು. ಫೆಬ್ರವರಿ 13, 2025ರಿಂದ ಮುಂದಿನ ಐದು ವರ್ಷಗಳವರೆಗೆ ಮಾನ್ಯತಾ ಅವಧಿ ಇರುತ್ತದೆ.



ಬೆಂಗಳೂರು ಕೃಷಿ ವಿಶ್ವವಿದ್ಯಾಲಯವು ಕರ್ನಾಟಕದ ಕೃಷಿ ವಿಶ್ವವಿದ್ಯಾನಿಲಯಗಳ ಪೈಕಿ ಎ ಪ್ಲಸ್ ಶ್ರೇಯಾಂಕವನ್ನು ಪಡೆದ ಮೊದಲ ವಿಶ್ವವಿದ್ಯಾನಿಲಯವಾಗಿದೆ. ಈ ಅರ್ಹತೆ ದೊರೆಯುವ ಮೂಲಕ ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮತ್ತು ಸಂಶೋಧನಾ ಶ್ರೇಷ್ಠತೆಯ ಪ್ರಯಾಣದಲ್ಲಿ ಮಹತ್ವದ ಮೈಲುಗಲ್ಲು ಸಾಧಿಸಿದಂತಾಗಿದೆ ಎಂದು ಕೃಷಿ ವಿವಿ ಕುಲಪತಿ ಎಸ್. ವಿ. ಸುರೇಶ ತಿಳಿಸಿದ್ದಾರೆ.

ಬೆಂಗಳೂರು ಕೃಷಿ ವಿವಿಗೆ ನ್ಯಾಕ್ ಮಾನ್ಯತೆ

ಬೆಂಗಳೂರು: ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯಕ್ಕೆ ರಾಷ್ಟ್ರೀಯ ಮೌಲ್ಯಮಾಪನ ಮತ್ತು ಮಾನ್ಯತಾ ಮಂಡಳಿಯು (ನ್ಯಾಕ್) ಎ + ಶ್ರೇಯಾಂಕ ನೀಡಿದೆ. ಕರ್ನಾಟಕದ ಕೃಷಿ ವಿಶ್ವವಿದ್ಯಾನಿಲಯಗಳಲ್ಲೇ ಎ+ ಶ್ರೇಯಾಂಕ ಸಂಪಾದಿಸಿದ ಮೊದಲ ವಿವಿ ಇದಾಗಿದೆ. ಕೃಷಿ ವಿವಿಯ ಕೃಷಿ ಶಿಕ್ಷಣ, ಸಂಶೋಧನೆ, ವಿಸ್ತರಣೆ ಮತ್ತು ಆಡಳಿತದಲ್ಲಿನ ಶ್ರೇಷ್ಠತೆಯನ್ನು ಪರಿಗಣಿಸಿ ಈ ಶ್ರೇಯಾಂಕ ನೀಡಲಾಗಿದ್ದು, ಮುಂದಿನ ಐದು ವರ್ಷದವರೆಗೂ ಮಾನ್ಯತಾ ಅವಧಿ ಇರಲಿದೆ. ಈ ಮಾನ್ಯತೆಯಿಂದಾಗಿ ಭವಿಷ್ಯದಲ್ಲಿ ಇನ್ನಷ್ಟು ಸಾಧನೆಗೆ ಸಹಕಾರಿಯಾಗಲಿದೆ.



ಈ ಬಗ್ಗೆ ಪ್ರತಿಕ್ರಿಯೆ ನೀಡಿರುವ ವಿವಿ ಕುಲಪತಿ ಡಾ.ಎಸ್.ವಿ.ಸುರೇಶ, ಈ ಸಾಧನೆಯು ರಾಜ್ಯ ಸರ್ಕಾರದ ಬೆಂಬಲ, ಬೋಧಕ-ಬೋಧಕೇತರ ಬಳಗ, ವಿದ್ಯಾರ್ಥಿ ವೃಂದ ಹಾಗೂ ಪಾಲುದಾರರ ಸಾಮೂಹಿಕ ಪ್ರಯತ್ನಗಳ ಫಲಿತಾಂಶವಾಗಿದೆ. ಈ ಮಾನ್ಯತೆಯು ಕೃಷಿ ಸಮುದಾಯ, ರಾಷ್ಟ್ರಕ್ಕೆ ಸೇವೆ ಸಲ್ಲಿಸಲು ನಮ್ಮ ಶೈಕ್ಷಣಿಕ ಮತ್ತು ಸಂಶೋಧನಾ ಪ್ರಯತ್ನಗಳನ್ನು ಮತ್ತಷ್ಟು ಹೆಚ್ಚಿಸಲು ನಮಗೆ ಸ್ಫೂರ್ತಿ ನೀಡಿದೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

Hosadigantha Pg.14

ಬೆಂಗಳೂರು ಕೃಷಿ ವಿ.ವಿಗೆ ಎ+ ಶ್ರೇಣಿ

ಬೆಂಗಳೂರು: ಬೆಂಗಳೂರು ಕೃಷಿ ವಿಶ್ವ ವಿದ್ಯಾಲಯಕ್ಕೆ ರಾಷ್ಟ್ರೀಯ ಮೌಲ್ಯಾಂಕನ ಮತ್ತು ಮಾನ್ಯತಾ ಮಂಡಳಿಯಿಂದ (ನ್ಯಾಕ್) ಎ+ ಶ್ರೇಣಿ ದೊರೆತಿದೆ ಎಂದು ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಕುಲಪತಿ ಎಸ್.ವಿ. ಸುರೇಶ ತಿಳಿಸಿದ್ದಾರೆ.

'ಬೆಂಗಳೂರು ಕೃಷಿ ವಿಶ್ವ ವಿದ್ಯಾಲಯವು ನ್ಯಾಕ್ ಮಾನ್ಯತೆಗೆ ಅರ್ಜಿ ಸಲ್ಲಿಸಿತ್ತು. ಫೆಬ್ರುವರಿ 5ರಿಂದ 7ರವರೆಗೆ ನ್ಯಾಕ್ ಪರಿಶೀಲನಾ ಸಮಿತಿಯು ವಿಶ್ವ ವಿದ್ಯಾಲಯ ಹಾಗೂ ಇದರ ಅಧೀನ ದಲ್ಲಿರುವ ಕಾಲೇಜುಗಳಿಗೆ ಭೇಟಿ ನೀಡಿತ್ತು. ಕೃಷಿ ವಿಜ್ಞಾನ ಶಿಕ್ಷಣ, ಸಂಶೋಧನೆ, ವಿಸ್ತರಣೆ ಮತ್ತು ಆಡಳಿತ ದಲ್ಲಿ ವಿಶ್ವವಿದ್ಯಾಲಯ ಗುಣಮಟ್ಟಕ್ಕೆ ಸಾಕ್ಷಿಯಾಗಿದೆ. ಶೈಕ್ಷಣಿಕ ಗುಣಮಟ್ಟ, ಪರಿಣಾಮಕಾರಿ ಸಂಶೋಧನೆ, ಮೂಲ ಸೌಕರ್ಯ ಅಭಿವೃದ್ಧಿ ಮತ್ತು ನವೀನ ಬೋಧನಾ ವಿಧಾನಗಳಿಗೆ ಅದರ ಬದ್ಧತೆಯನ್ನು ಎತ್ತಿಹಿಡಿದಿದೆ' ಎಂದು ಹೇಳಿದ್ದಾರೆ.

ಈ ಮಾನ್ಯತೆಯು ಮುಂದಿನ ಐದು ವರ್ಷಗಳವರೆಗೆ ಇರಲಿದೆ. ಬೆಂಗಳೂರು ಕೃಷಿ ವಿಶ್ವವಿದ್ಯಾಲಯವು ಎ+ ಮಾನ್ಯತೆ ಪಡೆದ ರಾಜ್ಯದ ಮೊದಲ ವಿಶ್ವ ವಿದ್ಯಾಲಯವಾಗಿದೆ ಎಂದು ಪ್ರಕಟಣೆ ಯಲ್ಲಿ ತಿಳಿಸಿದ್ದಾರೆ.

Prajavani Pg.02